ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12**

ಸಂಖ್ಯೆ: ಪಪೂಶಿಇ/ಶೈಶಾ/ರೈ.ಮ.ವಿ.ವೇ./2020-21 ದಿನಾಂಕ: 18.10.2021

**ಸುತ್ತೋಲೆ**

ವಿಷಯ: ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಲು ಹೊಸ ಶಿಷ್ಯ ವೇತನ ಜಾರಿಗೆ ತರಲು ಅಗತ್ಯ ಮಾಹಿತಿ ನೀಡುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: AGRI-AML/141/2021 ದಿನಾಂಕ: 7.8.21

* * * *

ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಲು ಹೊಸ ಶಿಷ್ಯ ವೇತನ ಯೋಜನೆಯನ್ನು ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಜಾರಿಗೆ ತರಲಾಗಿದ್ದು, ಸರ್ಕಾರದ ಆದೇಶ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಇದಕ್ಕೆ ಸಂಬಂಧಿಸಿದಂತೆ ದಿನಾಂಕ 23.08.2021 ರಂದು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಕೃಷಿ ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರು, ಉಪನಿರ್ದೇಶಕರು ಹಾಗೂ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ ಅಧಿಕಾರಿಗಳನ್ನು ಒಳಗೊಂಡಂತೆ Virtual meeting ಆಯೋಜಿಸಲಾಗಿತ್ತು. ಈ ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಆಯಾ ಜಿಲ್ಲಾ ಕೃಷಿ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸಿ ಸದರಿ ಅಧಿಕಾರಿಗಳು ಕೇಳಿರುವ ಮಾಹಿತಿಯನ್ನು ಒದಗಿಸಲು ತಿರ್ಮಾನಿಸಲಾಗಿತ್ತು. ಅದರಂತೆ ಮಾಹಿತಿಯನ್ನು ಕೃಷಿ ಅಧಿಕಾರಿಗಳಿಗೆ ನೀಡಿ ಸಹಕರಿಸಿರುತ್ತೀರಿ.

ಮುಂದುವರೆದು , ಇನ್ನೂ ಅನೇಕ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 3500ಕ್ಕೂ ಅಧಿಕ ವಿದ್ಯಾರ್ಥಿಗಳ ಆಧಾರ ಸಂಖ್ಯೆಯನ್ನು ಸ್ಟೂಡೆಂಟ್ ಅಕೌಂಟ್‌ಗೆ ಲಿಂಕ್ ಮಾಡಿರುವುದಿಲ್ಲ. ಆದ್ದರಿಂದ ಈ ವಿಷಯಕ್ಕೆ ಸಂಬಂಧಿಸಿದಂತೆ ಆಯಾ ಜಿಲ್ಲಾ ಕೃಷಿ ಇಲಾಖೆ ಅಧಿಕಾರಿಗಳು ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಮಾಹಿತಿ ಪಡೆಯಲು ಆಗಮಿಸಲಿದ್ದು, ಅವರಿಗೆ ಅಗತ್ಯ ಮಾಹಿತಿಯನ್ನು ನೀಡಿ ಸಹಕರಿಸುವಂತೆ ತಮ್ಮ ಜಿಲ್ಲಾ ವ್ಯಾಪ್ತಿಯ ಕಾಲೇಜುಗಳ ಪ್ರಾಂಶುಪಾಲರಿಗೆ ತಿಳಿಸಲು ಈ ಮೂಲಕ ಸೂಚಿಸಿದೆ.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ಇವರಿಗೆ ಅಗತ್ಯ ಕ್ರಮಕ್ಕಾಗಿ
2. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಅಂತರ್ಜಾಲದಲ್ಲಿ ಅಳವಡಿಸಲು
3. ಹೆಚ್ಚುವರಿ / ಕಛೇರಿ ಪ್ರತಿ



ಶ್ರೀ ಬಸವರಾಜ ಎಸ್. ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು

## ಅನ್ನದಾತರ ಮಕ್ಕಳ
## ಉನ್ನತ ವ್ಯಾಸಂಗಕ್ಕೆ ಉದಾತ್ತ ನೆರವು

# “ಮುಖ್ಯಮಂತ್ರಿ ರೈತ ವಿದ್ಯಾ ನಿಧಿ”

**ರಾಜ್ಯದ ರೈತಾಪಿ ಮಕ್ಕಳ ಉನ್ನತ ವ್ಯಾಸಂಗಕ್ಕೊಂದು ವರದಾನ ಈ ವಿಶಿಷ್ಟ ಕಾರ್ಯಕ್ರಮ.**




ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿ ಅವರು ಅಧಿಕಾರ ಸ್ವೀಕರಿಸಿದ ನಂತರ ಪ್ರಥಮವಾಗಿ ನಾಡಿನ ಅನ್ನದಾತ ರೈತರು ಮತ್ತು ಸಮಾಜದ ದುರ್ಬಲ ವರ್ಗಗಳ ಕಲ್ಯಾಣಕ್ಕಾಗಿ ಕೈಗೊಂಡ ಪ್ರಧಾನ ಪಂಚ ಕಾರ್ಯಕ್ರಮಗಳ ಪೈಕಿ ಮೊದಲನೆ ಕಾರ್ಯಕ್ರಮ “ಮುಖ್ಯಮಂತ್ರಿ ರೈತ ವಿದ್ಯಾನಿಧಿ”

ಎಸ್.ಎಸ್.ಎಲ್.ಸಿ (10ನೇ ತರಗತಿ) ಪರೀಕ್ಷೆಯನ್ನು ಯಶಸ್ವಿಯಾಗಿ ಪೂರೈಸಿದ ರೈತರ ಮಕ್ಕಳು ಮುಂದಿನ ವಿದ್ಯಾಭ್ಯಾಸದ ಕನಸು ಕೈಗೂಡಲು ಪ್ರತಿವರ್ಷ ಶಿಷ್ಯವೇತನ ಒದಗಿಸುವ ನೆರವಿನ ಕಾರ್ಯಕ್ರಮವಿದು. ವಾರ್ಷಿಕ ಶಿಷ್ಯವೇತನವನ್ನು ರೈತರ ಮಕ್ಕಳ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ಜಮೆ ಮಾಡಲಾಗುವುದು.

ಈ ಮಾದರಿ ಕಾರ್ಯಕ್ರಮ ಮೂಲಕ “ಅನ್ನದಾತ ಸುಖೀಭವ” ಎಂಬುದನ್ನು ಸಾಕಾರಗೊಳಿಸಿದೆ.

**ಎಲ್ಲಾ ರೈತ ಮಕ್ಕಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ಮುಖ್ಯಮಂತ್ರಿ ರೈತ ವಿದ್ಯಾ ನಿಧಿ ಕಾರ್ಯಕ್ರಮದ ಶಿಷ್ಯವೇತನಕ್ಕಾಗಿ ನೋಂದಾಯಿಸಿಕೊಳ್ಳಲು ವಿನಂತಿಸಿದೆ**

**ವಿ.ಸೂ: ಎಲ್ಲಾ ವಿದ್ಯಾರ್ಥಿಗಳು ತಮ್ಮ ಬ್ಯಾಂಕ್ ಖಾತೆಯನ್ನು ಕಡ್ಡಾಯವಾಗಿ ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿಸುವುದು**

### ಯೋಜನೆಯಡಿ ನೀಡಲಾಗುವ ವಾರ್ಷಿಕ ಶಿಷ್ಯ ವೇತನ

| ಕ್ರ.ಸಂ. | ಕೋರ್ಸ್‌ಗಳು | ವಿದ್ಯಾರ್ಥಿಗಳು | ವಿದ್ಯಾರ್ಥಿನಿಯರು |
|---|---|---|---|
| 1. | ಪಿ.ಯು.ಸಿ /ಐ.ಟಿ.ಐ/ಡಿಪ್ಲೊಮಾ | ರೂ.2,500/- | ರೂ.3,000/- |
| 2. | ಬಿ.ಎ/ ಬಿ.ಎಸ್.ಸಿ/ಬಿ.ಕಾಂ ಇನ್ನಿತರೆ ಪದವಿ ಕೋರ್ಸ್‌ಗಳು | ರೂ.5,000/- | ರೂ.5,500/- |
| 3. | ಎಲ್.ಎಲ್.ಬಿ/ಪ್ಯಾರಾಮೆಡಿಕಲ್/ ಬಿ.ಫಾರ್ಮ್/ ನರ್ಸಿಂಗ್ ಇನ್ನಿತರೆ ವೃತ್ತಿಪರ ಕೋರ್ಸ್‌ಗಳು | ರೂ.7,500/- | ರೂ.8,000/- |
| 4. | ಎಂ.ಬಿ.ಬಿ.ಎಸ್/ ಬಿ.ಇ/ ಬಿ.ಟೆಕ್ ಮತ್ತು ಎಲ್ಲ ಸ್ನಾತಕೋತ್ತರ ಕೋರ್ಸ್‌ಗಳು | ರೂ.10,000/- | ರೂ.11,000/- |

ಎಸ್.ಎಸ್.ಎಲ್.ಸಿ / ಹತ್ತನೇ ತರಗತಿಯನ್ನು ಪೂರ್ಣಗೊಳಿಸಿ ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಯಲ್ಲಿ ಪಿಯುಸಿ / ಪದವಿ / ಸ್ನಾತ್ತಕೋತ್ತರ ಕೋರ್ಸ್‌ಗಳಿಗೆ ಪ್ರವೇಶ ಪಡೆದಿರು ರೈತ ಮಕ್ಕಳಿಗೆ ಶಿಷ್ಯವೇತನ.

2021-22ನೇ ಸಾಲಿನಿಂದ ಕಾರ್ಯಕ್ರಮ ಅನುಷ್ಠಾನ.



**ಹೆಚ್ಚಿನ ಮಾಹಿತಿ ಪಡೆಯಲು ರೈತ ಸಹಾಯವಾಣಿ 1800 425 3553 ಗೆ ಉಚಿತ ಕರೆಮಾಡಿ**

ಪ್ರಕಟಣೆ: ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು